## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಡಾ// ರಾಜ್‌ಕುಮಾರ್ ವಾರ್ಡ್ ಸಂಖ್ಯೆ: 106**

---

ಸಂ : ಸ.ಅ(ವಾ–106)/ಪಿ.ಆರ್/ /2021–22 ದಿನಾಂಕ: 04/**10/2021**

### ವಾರ್ಡ್ ಸಮಿತಿ ಸಭೆಯ ನಡವಳಿ

ದಿನಾಂಕ: 04–10–2021 ರಂದು ವಾರ್ಡ್ ಸಂಖ್ಯೆ: 106 **ಡಾ// ರಾಜ್‌ಕುಮಾರ್ ವಾರ್ಡ್** ನಲ್ಲಿ ಶ್ರೀಮತಿ ಗೀತಾ ಎಲ್, ಕಾರ್ಯಪಾಲಕ ಅಭಿಯಂತರು, ಬಿಬಿಎಂಪಿ ಹಾಗೂ ವಾರ್ಡ್ ನಂ. 106 ರ ನೋಡಲ್ ಅಧಿಕಾರಿಗಳು ಇವರ ಅದ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿ

**ಹಾಜರಿದ್ದ ಅಧಿಕಾರಿ/ನೌಕರರು:–**

1) ಶ್ರೀಮತಿ. ಎನ್. ಅನ್ನಪೂರ್ಣ, ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಅ.ದಾಸರಹಳ್ಳಿ.
2) ಶ್ರೀ ತೀರ್ಥಪ್ರಸಾದ್, ಎಇಇ, ಘನತ್ಯಾಜ್ಯ ವಿಭಾಗ
3) ಶ್ರೀ ರೇಣುಕಾ ಪ್ರಸಾದ್. ಎ.ಆರ್.ಒ
4) ಶ್ರೀ ರಾಜೇಂದ್ರ ಕಂದಾಯ ಪರಿವೀಕ್ಷಕರು.
5) ಶ್ರೀ. ಅರುಣ್‌ಕುಮಾರ್, ಸಹಾಯಕ ಅಭಿಯಂತರರು
6) ನಾಗರಾಜ್. ಕೆ.ಬಿ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್‌ಬಿ
7) ಆನಂದ್, ಹೆಚ್.ವಿ, ಸಹಾಯಕ ಅಭಿಯಂತರರು, ಬೆಸ್ಕಾಂ
8) ನಾಗಣ್ಣಗೌಡ, ಹಿರಿಯ ಆರೋಗ್ಯ ಪರಿವೀಕ್ಷಕರು
9) ಶ್ರೀ ಚಂದ್ರಶೇಖರ್, ಕಿರಿಯ ಆರೋಗ್ಯ ಪರಿವೀಕ್ಷಕರು
10) ಶ್ರೀ ಅವಿನಾಶ್, ಸೂಪರ್‌ವೈಸರ್, ಘನತ್ಯಾಜ್ಯ
11) ಶ್ರೀ ರಾಜೇಶ್, ಸೂಪರ್‌ವೈಸರ್, ಘನತ್ಯಾಜ್ಯ
12) ಶ್ರೀ ಮುರಳಿ, ತೆರಿಗೆ ವಸೂಲಾತಿಗಾರರು.

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು/ಹಾಜರಿದ್ದವರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

- ಸಭೆಯಲ್ಲಿ ಈ ಹಿಂದಿನ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ಬಗ್ಗೆ ಚರ್ಚಿಸಲಾಯಿತು.

- ಮಾನ್ಯ ಅಧ್ಯಕ್ಷರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ನಾಯಿಗಳು ಹೆಚ್ಚಾಗಿದೆ ಎಂದು ಸಾರ್ವಜನಿಕರು ತಿಳಿಸಿದ್ದು, ಕೂಡಲೇ ಅವುಗಳನ್ನು ಹಿಡಿದು ಬೇರೆ ಸ್ಥಳಗಳಿಗೆ ವರ್ಗಾಯಿಸುವಂತೆ ಮಾನ್ಯ ಅಧ್ಯಕ್ಷರು ಸಂಭಂದಿಸಿದ ಅಧಿಕಾರಿಗಳಿಗೆ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಒಣಗಿರುವ ಮರಗಳನ್ನು ತೆರವುಗೊಳಿಸುವಂತೆ ಮಾನ್ಯ ಅಧ್ಯಕ್ಷರು ತಿಳಿಸಿದರು.

- **ಆರೋಗ್ಯ ಇಲಾಖೆ:-** ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಹಾಗೂ ಎಲ್ಲಾ ವರ್ಗದ ಕೆಲಸಗಳನ್ನು ಮಾಡುವ ಜನರಿಗೆ ಕೊರೋನಾ ಲಸಿಕೆ ನೀಡಬೇಕೆಂದು ತಿಳಿಸದರು.

- **ಸ್ವಚ್ಚತೆ ಮತ್ತು ಘನತ್ಯಾಜ್ಯ ವಿಲೇವಾರಿ ಬಗ್ಗೆ:-** ಮಾನ್ಯ ಅಧ್ಯಕ್ಷರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಹಸಿ ಹಾಗೂ ಒಣ ಕಸಗಳ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಹಾಗೂ ರಾಜಾಜಿನಗರ ಕೈಗಾರಿಕಾ ಪ್ರದೇಶಗಲ್ಲಿ ಸುರಿದಿರುವ ಕಸ/ವ್ಯಾಜ್ಯಗಳನ್ನು ಕೂಡಲೇ ತೆರವುಗೊಳಿಸುವಂತೆ ಸಂಭಂದಿಸಿದ ಅಧಿಕಾರಿಗಳಿಗೆ ತಿಳಿಸಿದರು.

- **ಬೆಸ್ಕಾಂ:** – ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಹಾಗೂ ಫುಟ್ಪಾತ್ ಮೇಲಿರುವ ಹಳೇ ವಿದ್ಯುತ್ ಕಂಬಗಳು ಮತ್ತು ಬಿರುಕು ಬಿಟ್ಟಿರುವ ಕಂಬಗಳನ್ನು ಬದಲಾಯಿಸಿ ಹೊಸ ಕಂಬಗಳನ್ನು ಹಾಕುವಂತೆ ಬೆಸ್ಕಾಂ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ತಿಳಿಸಿದರು.

- **ಬಿ.ಡಬ್ಲ್ಯೂ.ಎಸ್.ಎಸ್.ಬಿ : –** ವಾರ್ಡ್ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ಮ್ಯಾನ್ ಹೋಲ್ ಮತ್ತು ಸ್ಯಾನಿಟರಿ ಪೈಪ್‌ಗಳ ಅಳವಡಿಕೆಗಾಗಿ ರಸ್ತೆಗಳನ್ನು ಕತ್ತರಿಸಿದ್ದು ಕೂಡಲೇ ಕಾಮಗಾರಿಯನ್ನು ಮುಗಿಸುವಂತೆ ಮತ್ತು ಸರಿಯಾದ ರೀತಿಯಲ್ಲಿ ಗುಂಡಿಗಳನ್ನು ಮುಚ್ಚಿ ಸಾರ್ವಜನಿಕರ ಓಡಾಟಕ್ಕೆ ಅನುಕೂಲ ಮಾಡಬೇಕೆಂದು ತಿಳಿಸಿದರು.

- ಜನನಿಬೀಡ ಪ್ರದೇಶಗಳಲ್ಲಿ ಆಗಾಗ್ಗೆ ಔಷಧಿ ಸಿಂಪಡಿಸುವಂತೆ ಮಾನ್ಯ ಅಧ್ಯಕ್ಷರು ಹಿರಿಯ ಆರೋಗ್ಯ ಅಧಿಕಾರಿಗಳಾದ ಶ್ರೀ ನಾಗಣ್ಣಗೌಡರಿಗೆ ತಿಳಿಸಿದರು.

- **ಬೀದಿದೀಪಗಳು :** ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ಬೀದಿದೀಪಗಳು ಹಗಲು ಹೊತ್ತಿನಲ್ಲಿಯೂ ಕೂಡ ಉರಿಯುತ್ತಿದ್ದು ಸರಿಯಾಗಿ ನಿರ್ವಹಿಸುವಂತೆ ಮಾನ್ಯ ಅಧ್ಯಕ್ಷರು ಸಂಭಂದಿಸಿದ ಅಧಿಕಾರಿಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಪಾರ್ಕ್‌ಗಳನ್ನು ಸರಿಯಾಗಿ ನಿರ್ವಹಿಸುವಂತೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಳ್ಳಲು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸುಲು ಸೂಚಿಸಿ ಮುಂದಿನ ಸಭೆಗೆ ಎಲ್ಲಾ ಅಧಿಕಾರಿ ಸಿಬ್ಬಂದಿಗಳು ಹಾಜರಿರಲು ತಿಳಿಸಿ ಸಭೆಯನ್ನು ಮುಕ್ತಾಯ ಮಾಡಿದರು.

04/10/24

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.106 ಡಾ//ರಾಜ್‌ಕುಮಾರ್ ವಾರ್ಡ್
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

for 04/10/24

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್ ನೋಡಲ್ ಅಧಿಕಾರಿಗಳು
ವಾರ್ಡ್ ನಂ.106 ಡಾ//ರಾಜ್‌ಕುಮಾರ್ ವಾರ್ಡ್
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:-**

1) ಮಾನ್ಯ ಆಯುಕ್ತರುರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2) ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3) ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4) ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
5) ಮುಖ್ಯ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
6) ಅಧೀಕ್ಷಕ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಾರ್ಯಪಾಲಕ ಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂಎಸ್.ಎಸ್.ಬಿ ರವರ ಮಾಹಿತಿಗಾಗಿ ಕಳುಹಿಸಿದೆ